Akashvani : Bangalore

Regional Bulletin In Kannada

17.03.2025 18.40hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

*****************

ಮುಖ್ಯಾಂಶಗಳು

- ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುವಲ್ಲಿ ಯಶಸ್ವಿ -ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ
- ರಾಜ್ಯದಲ್ಲಿ ನಕಲಿ ಔಷಧಿ ನಿಯಂತ್ರಣಕ್ಕೆ ಅಗತ್ಯ ಕ್ರಮ; ಮೇಲ್ಮನೆಯಲ್ಲಿ ಸಚಿವ ದಿನೇಶ್ ಗುಂಡೂರಾವ್ ಭರವಸೆ
- ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ರಾಜ್ಯ ಪ್ರಶಸ್ತಿ ಪ್ರದಾನ ಮಾಡಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್
- ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಫ್ಲೆಕ್ಸ್ ಅಳವಡಿಸಿರುವವರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಮುಖ್ಯ ಆಯುಕ್ತರು ಸೂಚನೆ

*****************

ಗ್ಯಾರಂಟಿ ಯೋಜನೆಗಳು ಯಾವುದೇ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೇ ಜನರಿಗೆ ತಲುಪುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಸಮರ್ಥಿಸಿಕೊಂಡಿದ್ದಾರೆ.

ಈ ವೇಳೆ ಬಿಜೆಪಿ ಸದಸ್ಯ ಸುನೀಲ್ ಕುಮಾರ್ ಮತ್ತೆ ಅನುಷ್ಠಾನ ಸಮಿತಿಗಳನ್ನು ರಚಿಸಿದ್ದೇಕೆ ಎಂದು ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಯೋಜನೆಗಳು ಸರಿಯಾಗಿ ಜನರಿಗೆ ತಲುಪಬೇಕು ಎಂಬ ಕಾರಣಕ್ಕಾಗಿ ಸಮಿತಿಗಳನ್ನು ರಚಿಸಿದ್ದಾಗಿ ಸಮರ್ಥಿಸಿಕೊಂಡರು. ಬಿಜೆಪಿಯವರು ಆರ್ಥಿಕವಾಗಿ ಸರ್ಕಾರ ದಿವಾಳಿಯಾಗಿದೆ ಎಂದು ಭಾರೀ ಪ್ರಚಾರ ಮಾಡಿದರೂ ಯಾವುದೂ ಪ್ರಯೋಜನಕ್ಕೆ ಬರಲಿಲ್ಲ ಎಂದರು.

*****************

ರಾಜ್ಯದಲ್ಲಿ ನಕಲಿ ಔಷಧ ಮಾರಾಟ ಮಾಡುವ ಕಂಪನಿಗಳ ವಿರುದ್ಧ ಅಗತ್ಯ ಕ್ರಮ ಜರುಗಿಸಿ ನಿಯಂತ್ರಣಕ್ಕೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ.

ರಾಜ್ಯದಲ್ಲಿ  ಅಕ್ರಮವಾಗಿ ನೆಲೆಸಿರುವ ವಿದೇಶಿಯರನ್ನು ಪತ್ತೆ ಮಾಡಿ ಬಂಧಿಸಿದ ನಂತರ ಅವರನ್ನು ಸ್ವದೇಶಗಳಿಗೆ ಹಿಂದಿರುಗಿಸಲು ಅನುಕೂಲ ವಾಗುವಂತೆ ಕೇಂದ್ರ ಸರ್ಕಾರ ಕೆಲವು ನಿಯಮಗಳನ್ನು ಸರಳೀಕರಣ ಮಾಡಬೇಕೆಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮೇಲ್ಮನೆಯಲ್ಲಿಂದು ಮನವಿ ಮಾಡಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಅವರು, ಬಿಜೆಪಿ ಸದಸ್ಯ ಪಿ.ಎಚ್. ಪೂಜಾರ್ ಅವರ ಪ್ರಶ್ನೆಗೆ ಉತ್ತರ ನೀಡಿ, ಬಾಂಗ್ಲಾದೇಶ ಸೇರಿದಂತೆ ವಿವಿಧ ದೇಶಗಳ ಅಕ್ರಮ ವಲಸಿಗರನ್ನು ಪತ್ತೆ ಮಾಡಿ ಬಂಧಿಸಲಾಗುತ್ತಿದ್ದು, ಕೂಡಲೇ ಅವರನ್ನು ಅವರ ಸ್ವದೇಶಗಳಿಗೆ ಕಳುಹಿಸಿ ಕೊಡಲು ಆಗುತ್ತಿಲ್ಲ. ಇದಕ್ಕೆ ಕೆಲವು ಕಾನೂನಿನ ತೊಡಕುಗಳು ಎದುರಾಗುತ್ತಿವೆ ಎಂದು ಗಮನ ಸೆಳೆದರು.

ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಸರ್ಕಾರಿ ಗುತ್ತಿಗೆ ಕಾಮಗಾರಿ ನೀಡುವಲ್ಲಿ ಅಲ್ಪ ಸಂಖ್ಯಾತರಿಗೆ ಧರ್ಮಾಧಾರಿತ ಮೀಸಲಾತಿ ಕಲ್ಪಿಸುವ ಸರ್ಕಾರದ ಧೋರಣೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ವಾದವಿವಾದ ಏರಿದ ಧ್ವನಿಯಲ್ಲಿ ನಡೆದಿದ್ದರಿಂದ ಸದನದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಈ ಕುರಿತು ಪ್ರತ್ಯೇಕವಾಗಿ ನೋಟೀಸ್ ನೀಡಿದರೆ ಚರ್ಚೆಗೆ ಅವಕಾಶ ಮಾಡಿಕೊಡುವುದಾಗಿ ಭರವಸೆ ನೀಡಿದ ನಂತರ ಪರಿಸ್ಥಿತಿ ತಿಳಿಯಾಯಿತು.

******************

ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಪರಿಸರ ಸಂರಕ್ಷಣೆ, ರಸ್ತೆ ಸುರಕ್ಷತೆ ಜಾಗೃತಿ ವಿಪತ್ತು ನಿರ್ವಹಣೆ ಜೊತೆಗೆ ಚುನಾವಣೆಯಲ್ಲಿ ಸ್ವಯಂ ಸೇವಕರಾಗಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಸಂಸ್ಥೆಯು ಇಂದು ರಾಜಭವನದ ಆವರಣದಲ್ಲಿ ಏರ್ಪಡಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕೃಷ್ಣದೇವ ರಾಜ ಒಡೆಯರ್, ೧೯೧೭ರಲ್ಲಿ ರಾಜಾಜ್ಞೆ ಮೂಲಕ ಆರಂಭ ಗೊಂಡ ಈ ಸಂಸ್ಥೆ ಇಂದು ದೊಡ್ಡ ಸ್ವಯಂ ಸೇವಕ ಸಂಸ್ಥೆಯಾಗಿ ಬೆಳೆದಿದೆ ಎಂದು ಹೇಳಿದರು.

ಧ್ವನಿ: ಥಾವರ್‌ಚಂದ್ ಗೆಹ್ಲೋಟ್

ಕಾರ್ಯಕ್ರಮದಲ್ಲಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರನ್ನು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕದ ಹೆಚ್ಚುವರಿ ರಾಜ್ಯ ಮುಖ್ಯ ಆಯುಕ್ತರನ್ನಾಗಿ ಪಿ.ಜಿ. ಆರ್. ಸಿಂಧ್ಯಾ ಘೋಷಣೆ ಮಾಡಿದರು.

ಇದೇ ವೇಳೆ ಪ್ರಶಸ್ತಿ ಪಡೆದ ವಿದ್ಯಾರ್ಥಿನಿ ಸ್ಫೂರ್ತಿ ಸಂತಸ ಹಂಚಿಕೊಂಡರು.

******************

ವೈಯಕ್ತಿಕ ಭಿನ್ನಾಭಿಪ್ರಾಯ ಬದಿಗಿಟ್ಟು ಕಾಂಗ್ರೆಸ್ ಪಕ್ಷದ ಸಿದ್ಧಾಂತಕ್ಕೆ ಬದ್ಧರಾಗಿ ಪಕ್ಷ ಸಂಘಟಿಸುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಯುವ ಕಾಂಗ್ರೆಸ್ ಪದಾಧಿಕಾರಿಗಳಿಗೆ ಬೆಂಗಳೂರಿನಲ್ಲಿ ಕರೆ ನೀಡಿದ್ದಾರೆ.

ಬೆಂಗಳೂರಿನ ಅರಮನೆ ಮೈದಾನದಲ್ಲಿಂದು ನಡೆದ “ಯುವ ಸಂಕಲ್ಪ” ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ೨೦೨೮ರಲ್ಲಿ ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸುವಂತೆ ತಿಳಿಸಿದ್ದಾರೆ.

ಇದಕ್ಕೂ ಮೊದಲು ಯುವ ಕಾಂಗ್ರೆಸ್ ಚುನಾವಣೆ ಮೂಲಕ ಆಯ್ಕೆಯಾದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಪ್ರತಿಜ್ಞಾ ವಿಧಿ ಬೋಧಿಸಿದರು. ನಂತರ ಡಿ.ಕೆ. ಶಿವಕುಮಾರ್ ಹಾಗೂ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷರಾದ ಮೊಹಮದ್ ಹ್ಯಾರಿಸ್ ನಲಪಾಡ್ ನೂತನ ಅಧ್ಯಕ್ಷ ಮಂಜುನಾಥ್ ಗೌಡ ಅವರಿಗೆ ಕಾಂಗ್ರೆಸ್ ಧ್ವಜ ಹಸ್ತಾಂತರ ಮಾಡಿದರು.

******************

ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಫ್ಲೆಕ್ಸ್, ಬ್ಯಾನರ್ ಗಳನ್ನು ತೆರವುಗೊಳಿಸಿ ಎಫ್.ಐ.ಆರ್ ದಾಖಲಿಸಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿವಿಧ ವಿಷಯಗಳ ಕುರಿತು ಪಾಲಿಕೆಯ ಕೇಂದ್ರ ಕಛೇರಿಯಲ್ಲಿ ಇಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ನಗರದಲ್ಲಿ ಅನಧಿಕೃತವಾಗಿ ಅಳವಡಿಸುವ ಫ್ಲೆಕ್ಸ್, ಬ್ಯಾನರ್ ಗಳ ಸಂಖ್ಯೆ ಹೆಚ್ಚಾಗಿದ್ದು, ಎಲ್ಲಾ ಕಡೆ ತೆರವುಗೊಳಿಸಬೇಕು. ಫ್ಲೆಕ್ಸ್, ಬ್ಯಾನರ್ ಅಳವಡಿಸಿರುವವರಿಗೆ ದುಪ್ಪಟ್ಟು ದಂಡ ವಿಧಿಸುವ ಜೊತೆಗೆ ಎಫ್.ಐ.ಆರ್ ದಾಖಲಿಸಲು ಸೂಚನೆ ನೀಡಿದ್ದಾರೆ.

ಈ ಸಂಬಂಧ ಎಲ್ಲಾ ಅಧಿಕಾರಿಗಳು ತಮ್ಮ ವಲಯಗಳಲ್ಲಿ ಪರಿಶೀಲನೆ ನಡೆಸಿ ಅನಧಿಕೃತ ಫ್ಲೆಕ್ಸ್ ಗಳನ್ನು ತ್ವರಿತಗತಿಯಲ್ಲಿ ತೆರವುಗೊಳಿಸಲು ಸೂಚಿಸಿದ್ದಾರೆ. ನಗರದ ಪೂರ್ವ, ಪಶ್ಚಿಮ ಹಾಗೂ ಯಲಹಂಕ ಸೇರಿದಂತೆ ಹಲವೆಡೆ ೧ ಸಾವಿರದ ೩೫೦ ಕ್ಕೂ ಹೆಚ್ಚು ಫ್ಲೆಕ್ಸ್, ಬ್ಯಾನರ್ ಗಳನ್ನು ತೆರವುಗೊಳಿಸಲಾಗಿದೆ. ಇದುವರೆಗೆ ೧೨ ಎಫ್.ಐ.ಆರ್ ಗಳನ್ನು ದಾಖಲಿಸಲಾಗಿದ್ದು, ೧೨ ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ ಎಂದು ತಿಳಿಸಿದ್ದಾರೆ.

*****************

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಭಾಗಿಯಾಗಿರುವ ಇಬ್ಬರು ಸಚಿವರ ಹೆಸರನ್ನು ಬಹಿರಂಗಪಡಿಸುವಂತೆ ಕಾಂಗ್ರೆಸ್ ಪಕ್ಷ ಬಿಜೆಪಿಗೆ ಸವಾಲು ಹಾಕಿದೆ.

ಇಬ್ಬರು ಸಚಿವರು ಭಾಗಿಯಾಗಿದ್ದಾರೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಬಿಜೆಪಿ ನಾಯಕರಿಗೆ ಧೈರ್ಯವಿದ್ದರೆ, ಇಬ್ಬರ ಸಚಿವರ ಹೆಸರು ಬಹಿರಂಗಪಡಿಸುವಂತೆ ಆಗ್ರಹಿಸಿದ್ದಾರೆ.

ಆಧಾರ ರಹಿತ ಆರೋಪಗಳನ್ನು ಮಾಡುತ್ತಿರುವ ಬಿಜೆಪಿ ನಾಯಕರು ಪ್ರಕರಣದಲ್ಲಿ ಭಾಗಿಯಾಗಿರುವ ಮಾಜಿ ಶಾಸಕರು ಮತ್ತು ಕೇಂದ್ರ ಸಚಿವರ ಹೆಸರನ್ನೂ ಬಹಿರಂಗಪಡಿಸುವಂತೆ ಸವಾಲು ಹಾಕಿದ್ದಾರೆ.

ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಕಂದಾಯ ಗುಪ್ತಚರ ಇಲಾಖೆ ಮತ್ತು ಕೇಂದ್ರ ತನಿಖಾ ದಳ ಹೊಂದಿರದ ಮಾಹಿತಿಯನ್ನು ಬಿಜೆಪಿ ನಾಯಕರು ಹೊಂದಿದ್ದರೆ ಬಹಿರಂಗಪಡಿಸಲಿ ಎಂದು ತಿಳಿಸಿದ್ದಾರೆ.

*****************

ಛತ್ತೀಸಗಡದ ಬಿಲಾಸಪೂರ್ ಒಳಾಂಗಣ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಖೇಲೋ ಇಂಡಿಯಾ ಮಹಿಳೆಯರ ಸೀನಿಯರ್ ವುಶೂ ಲೀಗ್ ಸ್ಪರ್ಧೆಗೆ ಕೊಪ್ಪಳದ ಕ್ರೀಡಾಪಟುಗಳಾದ ಐಶ್ವರ್ಯ ಹಾಗೂ ಆಶಾ ಆಯ್ಕೆಯಾಗಿದ್ದಾರೆ.

ಇದೇ ೨೦ ರಿಂದ ೨೩ರವರೆಗೆ ನಡೆಯಲಿರುವ ಕ್ರೀಡಾಕೂಟಕ್ಕೆ ಕಲ್ಯಾಣ ಕರ್ನಾಟಕದ ಪ್ರಥಮ ವುಶೂ ಕ್ರೀಡಾಪಟುಗಳಾಗಿ ಇವರು ಸ್ಪರ್ಧಿಸಲಿದ್ದಾರೆ.

ಆಕಾಶವಾಣಿ ಜೊತೆ ಮುಖ್ಯ ತರಬೇತುದಾರ ಬಾಬುಸಾಬ ಮಾತನಾಡಿ, "ಈ ಕ್ರೀಡಾಕೂಟದಲ್ಲಿ ಕರ್ನಾಟಕದ ಮೊದಲ ಮಹಿಳಾ ವುಶೂ ಕ್ರೀಡಾಪಟುಗಳಾಗಿ ಇವರು ಆಯ್ಕೆಯಾಗಿರುವುದು ಹೆಮ್ಮೆಯ ವಿಚಾರ ಎಂದು ತಿಳಿಸಿದ್ದಾರೆ.

ಧ್ವನಿ: ಬಾಬುಸಾಬ, ಕ್ರೀಡಾ ತರಬೇತುದಾರ

*****************

ಇನ್ನು ಸಂಕ್ಷಿಪ್ತ ಸುದ್ದಿ...

- ಆತ್ಮನಿರ್ಭರ್ ನಂಥ ಯೋಜನೆಗಳಿಂದಾಗಿ ಭಾರತದಲ್ಲಿ ಉದ್ಯೋಗ ಗಳಿಕೆಯ ಪ್ರಮಾಣ ಶೇ ೧೭ ರಷ್ಟು ಹೆಚ್ಚಾಗಿದೆ ಎಂದು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಸದಸ್ಯೆ ವಿಜಯ್ ಭಾರತಿ ಸಹಾನಿ ಕೊಡಗಿನಲ್ಲಿ ಹೇಳಿದ್ದಾರೆ.
- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನ, ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನದಡಿ ಸುಮಾರು ೨ ಕೋಟಿ ೬೬ ಲಕ್ಷ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಚಾಲನೆ ನೀಡಿದರು.
- ಗದಗ ನಗರದ ಕಳಸಾಪೂರ ರಸ್ತೆಯಲ್ಲಿ ಲಾನ್ ಟೆನ್ನಿಸ್ ಕೋರ್ಟ್ ನಿರ್ಮಾಣ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಭೂಮಿ ಪೂಜೆ ನೆರವೇರಿಸಿದರು.
- ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಪ್ರಸಕ್ತ ಸಾಲಿನ ಶೈಕ್ಷಣಿಕ ಪ್ರವೇಶಾತಿ ಆರಂಭಿಸಿದ್ದು, ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶಾತಿಯನ್ನು ಮಾಡಿಕೊಳ್ಳುತ್ತಿದೆ. ಪ್ರವೇಶಾತಿಗೆ ಕೊನೆಯ ದಿನಾಂಕ ಇದೇ ತಿಂಗಳ ೩೧ ಎಂದು ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.
- ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ಮಾಕಾರಹಳ್ಳಿ ಬಳಿ ಕಲ್ಲು ಕ್ರಷರ್ ನಲ್ಲಿ ಬ್ಲಾಸ್ಟಿಂಗ್ ವೇಳೆ ಕಲ್ಲು ಬಿದ್ದು ಓರ್ವ ಸಾವನ್ನಪ್ಪಿದ್ದು, ಮೂವರಿಗೆ ಗಾಯಗಳಾಗಿವೆ. ಘಟನಾ ಸ್ಥಳಕ್ಕೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

- ಚಿಕ್ಕಬಳ್ಳಾಪುರ ತಾಲ್ಲೂಕಿನ ಗುಂಡ್ಲಮಂಡಿಕಲ್ಲು ಗ್ರಾಮದಲ್ಲಿ ೩೮ ಪರಿಶಿಷ್ಟ ಕುಟುಂಬಗಳಿಗೆ ಶೀಘ್ರವೇ ಶೌಚಾಲಯಗಳ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲಾಗುವುದು ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ.

*********ಮುಕ್ತಾಯ********